ಮಕ್ಕಳು ತಮ್ಮ ಹಕ್ಕುಗಳ ಬಗ್ಗೆ ಅರಿತುಕೊಳ್ಳಬೇಕು. ಜತೆಗೆ ತಮ್ಮ ಕರ್ತವ್ಯ ಕೂಡ ನಿಭಾಯಿಸಬೇಕು. ಬಾಲಕರು ಬೈಕ್ ಓಡಿಸುವುದು ಕಾನೂನು ರೀತ್ಯ ಅಪರಾಧವಾಗಿದೆ. ಈ ನೆಲದ ಕಾನೂನುಗಳನ್ನು ಪರಿಪಾಲಿಸಬೇಕು.
● **ಶ್ರೀಹರಿಬಾಬು** ಎಸ್ಪಿ

ಸುದ್ದಿ ಸಿಂಚನ

ಸಂಭ್ರಮದ ದಿಂಡಿ ಉತ್ಸವ ಮೆರವಣಿಗೆ

ಕೊಟ್ಟೂರು: ಭಾವ ಸಾರಕ್ಷತ್ರಿಯ ಸಮಾಜದ ವಾರ್ಷಿಕ ಉತ್ಸವ ಶ್ರೀ ರುಕ್ಮಿಣಿ ಪಾಂಡುರಂಗ ದೇವರ 32ನೇ ದಿಂಡಿ ಉತ್ಸವ ಇಲ್ಲಿನ ಪಾಂಡುರಂಗ ದೇವಸ್ಥಾನದಲ್ಲಿ 3 ದಿನಗಳ ಕಾಲ ನಡೆಯಿತು. ಕೊನೆಯ ದಿನದ ದಿಂಡಿ ಉತ್ಸವದಲ್ಲಿ ಪಂಢರಾಪುರದ ಗುರುಗಳಾದ ತುಕರಾಮ್ ಪವರ್‌ಗುರೂಜಿಯಿಂದ ಕೀರ್ತನೆ ನಡೆಯಿತು. ಕೃಷ್ಣಮೂರ್ತಿ ಬಾಂಗಳಿ ಅವರಿಂದ ಪ್ರವಚನ ಮತ್ತು ಗೋಂದಲೇ ಸಮಾಜದ ಹುಬ್ಬಳ್ಳಿ ಬಂಧುಗಳು, ಕಿರಣ್ ಕುಮಾರ್‌ಗುರೂಜಿ ಸಂಘಟಕರಿಂದ ಸಂಗೀತ ಕಾರ್ಯಕ್ರಮ ನಡೆಯಿತು. ಆನಂತರ ಪಟ್ಟಣದ ಬೀದಿ ಗುಂಟ ಮೆರವಣಿಗೆ ನಡೆಯಿತು. ಕೊಟ್ಟೂರು ತಾಲೂಕು ಕ್ಷತ್ರಿಯ ಸಮಾಜ ಅಧ್ಯಕ್ಷ ಪಿ.ಸೆ. ಪ್ರಭುದೇವ್, ಹವಳಿ ಕೊಟ್ರೇಶ್, ಡೋಂಗ್ರಿ ವಿಜಯಕುಮಾರ್, ಲೋಕರೆ ವಾಸುದೇವ್ ರಾವ್, ಸುಲಕೆ ಸುರೇಶ್ ರಾವ್, ಲೋಕರೆ ರಮೇಶ್ ರಾವ್, ನೇತೃತ್ವ ವಹಿಸಿದರು.

ಹೆರಿಗೆ ಬಳಿಕ ಶಿಶು ಸಾವು: ವೈದ್ಯ ನಿರ್ಲಕ್ಷ್ಯದ ಆರೋಪ

ಬಳ್ಳಾರಿ: ನಗರದ ಬಿಮ್ಸ್ ಆಸ್ಪತ್ರೆಯಲ್ಲಿ ಹೆರಿಗೆ ಬಳಿಕ ಶಿಶುವೊಂದು ಮರಣ ಹೊಂದಿದ್ದು, ವೈದ್ಯರ ನಿರ್ಲಕ್ಷ್ಯವೇ ಕಾರಣ ಎಂದು ಕುಟುಂಬ ಸದಸ್ಯರು ಆರೋಪಿಸಿದ್ದಾರೆ. ಸಿರುಗುಪ್ಪ ತಾಲೂಕಿನ ಶಿರಿಗೇರಿಯ ಗಂಗೋತ್ರಿ ಎಂಬವರು ಗಂಡು ಶಿಶುವಿಗೆ ಜನ್ಮ ನೀಡಿದ್ದರು. ಹೆರಿಗೆ ಬಳಿಕ ಮಗು ಆರೋಗ್ಯವಾಗಿದೆ ಎಂದು ವೈದ್ಯರು ಹೇಳಿದ್ದರು. ಬಳಿಕ ಕೆಲವೇ ಹೊತ್ತಿನಲ್ಲಿ ಶಿಶುವಿನ ಆರೋಗ್ಯದಲ್ಲಿ ಏರುಪೇರಾಗಿ ಅಸು ನೀಗಿದೆ. ಇದಕ್ಕೆ ವೈದ್ಯರ ನಿರ್ಲಕ್ಷ್ಯ ಕಾರಣ ಎಂದು ಕುಟುಂಬ ಸದಸ್ಯರ ಆರೋಪವನ್ನು ನಿರಾಕರಿಸಿರುವ ಬಿಮ್ಸ್ ವೈದ್ಯರು, ಗರ್ಭದಲ್ಲಿರುವಾಗಲೇ ಶಿಶು ಶ್ವಾಸಕೋಶದ ಸಮಸ್ಯೆ ಎದುರಿಸುತ್ತಿತ್ತು. ಆಗತ್ಯ ಚಿಕಿತ್ಸೆ ನೀಡಲಾಗಿದೆ. ಚಿಕಿತ್ಸೆ ಫಲಿಸದೆ ಮೃತಪಟ್ಟಿದೆ ಎಂದು ತಿಳಿಸಿದ್ದಾರೆ. ಶಸ್ತ್ರಚಿಕಿತ್ಸೆ ಹೆರಿಗೆ ಮಾಡುವುದು ಬೇಡ. ಸಹಜ ಹೆರಿಗೆ ಆಗಲಿ ಎಂದು ಕುಟುಂಬದ ಸದಸ್ಯರು ತಡೆದಿದ್ದರು. ಗರ್ಭದಲ್ಲಿರುವಾಗಲೇ ಶಿಶು ಮಲ ತಿಂದು ಸಮಸ್ಯೆಯಲ್ಲಿತ್ತು ಎಂದು ವೈದ್ಯರು ತಿಳಿಸಿದ್ದಾರೆ.

ಮದ್ಯದ ಅಮಲಿನಲ್ಲಿ ಕರ್ತವ್ಯಕ್ಕೆ ಹಾಜರಾದ ವೈದ್ಯಾಧಿಕಾರಿ

ಬಳ್ಳಾರಿ: ಜಿಲ್ಲೆಯ ಸಿರುಗುಪ್ಪ ತಾಲೂಕಿನ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಯೊಬ್ಬ ಮದ್ಯದ ಅಮಲಿನಲ್ಲಿ ಕರ್ತವ್ಯಕ್ಕೆ ಹಾಜರಾಗಿದ್ದು, ಈ ಕುರಿತು ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಮದ್ಯದ ಅಮಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈತ ರೋಗಿಗಳ ಬಳಿ ಟೇಬಲ್ ಕುಟ್ಟಿ ಕುಟ್ಟಿ ಮಾತನಾಡುತ್ತಿರುವುದು ವಿಡಿಯೋದಲ್ಲಿ ಕಂಡು ಬಂದಿದೆ. ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ವೈದ್ಯಾಧಿಕಾರಿ ಮದ್ಯ ಸೇವಿಸಿ ಕರ್ತವ್ಯಕ್ಕೆ ಹಾಜರಾಗಿರುವುದು ಗಮನಕ್ಕೆ ಬಂದಿದೆ. ಕೂಡಲೇ ಕ್ರಮ ವಹಿಸಲಾಗುವುದು. ಸಿರುಗುಪ್ಪ ತಾಲೂಕಿನ ವೈದ್ಯಾಧಿಕಾರಿಯಾಗಿದ್ದ ಈತನನ್ನು ಈಚೆಗಷ್ಟೇ ಸಾರ್ವಜನಿಕ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿಯಾಗಿ ನಿಯೋಜಿಸಲಾಗಿತ್ತು ಎಂದು ಡಿಎಚ್‌ಒ ತಿಳಿಸಿದ್ದಾರೆ.

KP

ಭಾವ ಸಾರಕ್ಷತ್ರಿಯ ಸಮಾಜದ ವಾರ್ಷಿಕ ಉತ್ಸವ ಶ್ರೀ ರುಕ್ಮಿಣಿ ಪಾಂಡುರಂಗ ದೇವರ 32ನೇ ದಿಂಡಿ ಉತ್ಸವ ಕೊಟ್ಟೂರಿನ ಪಾಂಡುರಂಗ ದೇವಸ್ಥಾನದಲ್ಲಿ 3 ದಿನಗಳ ಕಾಲ ನಡೆಯಿತು. ಪಟ್ಟಣದ ಬೀದಿಯಲ್ಲಿ ಮೆರವಣಿಗೆ ನಡೆಯಿತು.

KP

ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲಿನ ದೌರ್ಜನ್ಯ ಖಂಡಿಸಿ ಹೊಸಪೇಟೆಯಲ್ಲಿ ದಲಿತ ಹಾಗೂ ಶೋಷಿತರ ಧ್ವನಿ ಸಂಘಟನೆ, ಹಿಂದೂಪರ ಸಂಘಟನೆಗಳಿಂದ ಗುರುವಾರ ಪ್ರತಿಭಟನೆ ನಡೆಯಿತು. ಈ ವೇಳೆ ಬೈಕ್ ರ‍್ಯಾಲಿ ನಡೆಸಲಾಯಿತು.

KP

ಹರಪನಹಳ್ಳಿ ತಾಲೂಕಿನ ಚಿಕ್ಕಮೇಗಳಗೆರೆಯಲ್ಲಿ ನಡೆದ ಧರ್ಮಸಭೆಯಲ್ಲಿ ರಂಭಾಪುರಿ ಜಗದ್ಗುರು ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯರು ಸಾನ್ನಿಧ್ಯ ವಹಿಸಿ ಮಾತನಾಡಿದರು.

ಪೊಲೀಸರೇ ದೌರ್ಜನ್ಯ ಎಸಗಿದರೆ ಯಾರ ಬಳಿ ದೂರಬೇಕು?

ಮಕ್ಕಳೊಂದಿಗೆ ಸಂವಾದ, ಮಕ್ಕಳ ಸಂಬಂಧಿಸಿದ ಕಾಯ್ದೆಗಳ ಕುರಿತು ಜಾಗೃತಿ

KP

ಹೊಸಪೇಟೆಯ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಮಕ್ಕಳೊಂದಿಗೆ ಮುಕ್ತ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಮಕ್ಕಳು.

● **ಕನ್ನಡಪ್ರಭ ವಾರ್ತೆ** ಹೊಸಪೇಟೆ

ಸಿಗರೇಟು, ಗುಟ್ಕಾ, ಮದ್ಯಪಾನ ಸಂಪೂರ್ಣ ನಿಷೇಧಿಸಬೇಕು. ಮಕ್ಕಳ ಮೇಲೆ ದೌರ್ಜನ್ಯ ನಡೆದಾಗ ಪೊಲೀಸರೇ ನಿರ್ಲಕ್ಷ್ಯ ಮಾಡಿದರೆ ಏನು ಮಾಡಬೇಕು? ಪೊಲೀಸರೇ ದೌರ್ಜನ್ಯ ಎಸಗಿದರೆ ಯಾರ ಬಳಿ ದೂರು ಸಲ್ಲಿಸಬೇಕು? ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ ಈಗಲೂ ಏಕೆ ಜೀವಂತವಾಗಿದೆ? ಮಕ್ಕಳ ಶಿಕ್ಷಣಕ್ಕಾಗಿ ಸರಿಯಾದ ಸಮಯಕ್ಕೆ ಹಳ್ಳಿಗಾಡಿನಲ್ಲಿ ಬಸ್‌ಗಳು ಏಕೆ ಓಡಿಸುತ್ತಿಲ್ಲ?

ಮಕ್ಕಳ ರಕ್ಷಣಾ ನಿರ್ದೇಶನಾಲಯ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ವಿಜಯನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿವಿಧ ಇಲಾಖೆಗಳೊಂದಿಗೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಮಕ್ಕಳೊಂದಿಗೆ ಮುಕ್ತ ಸಂವಾದ ಹಾಗೂ ಮಕ್ಕಳ ಸಂಬಂಧಿಸಿದ ಕಾಯ್ದೆಗಳ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಮಕ್ಕಳು ಕೇಳಿದ ಪ್ರಶ್ನೆಗಳು.

ಶಾಲಾ, ಕಾಲೇಜು ಆವರಣದಲ್ಲಿ ಗುಟ್ಕಾ, ತಂಬಾಕು ನಿಯಂತ್ರಣಕ್ಕೆ ಏಕೆ ಕ್ರಮಕೈಗೊಳ್ಳಲಾಗುತ್ತಿಲ್ಲ ಎಂದು ಶಾಲಾ ಬಾಲಕನೋರ್ವ ಕೇಳಿದ ಪ್ರಶ್ನೆಗೆ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ್‌ಕೋಸಂಬೆ, ಈ ಕುರಿತು ಸರ್ಕಾರಕ್ಕೆ ಹಾಗೂ ಶಿಕ್ಷಣ ಇಲಾಖೆಗೆ ಆಯೋಗದಿಂದ ಪತ್ರ ಬರೆಯಲಾಗುವುದು ಎಂದು ಉತ್ತರಿಸಿದರು.

ರಾಜ್ಯದಲ್ಲಿ ಮದ್ಯಪಾನ ಸಂಪೂರ್ಣ ನಿಷೇಧ ಏಕೆ ಮಾಡಿಲ್ಲ ಎಂದು ಶಾಲಾ ಬಾಲಕಿ ಪ್ರಶ್ನೆ ಮಾಡಿದರು. ಆಗ ಇದು ಸರ್ಕಾರ ಮಟ್ಟದ ಪ್ರಶ್ನೆಯಾಗಿದ್ದು, ಸರ್ಕಾರದ ಗಮನಕ್ಕೆ ತರುತ್ತೇವೆ ಎಂದು ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ್ ಕೋಸಂಬೆ ಉತ್ತರಿಸಿದರು.

ಪೊಲೀಸರೇ ದೌರ್ಜನ್ಯ ಎಸಗಿದರೆ ಯಾರ ಬಳಿ ದೂರಬೇಕು?: ಮಕ್ಕಳ ಮೇಲೆ ದೌರ್ಜನ್ಯ ನಡೆದಾಗ ಪೊಲೀಸರೇ ನಿರ್ಲಕ್ಷ್ಯ ಮಾಡಿದರೆ ಏನು ಮಾಡಬೇಕು? ಪೊಲೀಸರೇ ದೌರ್ಜನ್ಯ ಎಸಗಿದರೆ ಯಾರ ಬಳಿ ದೂರು ಸಲ್ಲಿಸಬೇಕು ಎಂದು ಶಾಲಾ ಬಾಲಕಿ ಎಸ್ಪಿ ಶ್ರೀಹರಿಬಾಬು ಅವರಿಗೆ ಸಂವಾದದಲ್ಲಿ ಪ್ರಶ್ನಿಸಿದರು.

ಈ ಪ್ರಶ್ನೆ ಉತ್ತಮದ್ದಾಗಿದೆ. ಮಕ್ಕಳ ಸಹಾಯವಾಣಿ 1098ಗೆ ಕರೆ ಮಾಡಿ ಹೇಳಬಹುದು. 112 ಕರೆ ಮಾಡಬಹುದು. ಅಲ್ಲದೇ, ಪೊಲೀಸ್ ಇನ್‌ಸ್ಪೆಕ್ಟರ್, ಡಿವೈಎಸ್ಪಿ, ಎಸ್ಪಿ ಅವರ ಬಳಿಯೂ ದೂರಬಹುದು. ಆ ರೀತಿ ನಡೆದರೆ ಕಾನೂನು ರೀತ್ಯ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗುವುದು ಎಂದು ಉತ್ತರಿಸಿದರು.

ಬಾಲಕರು ಬೈಕ್ ಓಡಿಸಬಹುದಾ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಎಸ್ಪಿ ಅವರು, ಮಕ್ಕಳು ತಮ್ಮ ಹಕ್ಕುಗಳ ಬಗ್ಗೆ ಅರಿತುಕೊಳ್ಳಬೇಕು. ಜತೆಗೆ ತಮ್ಮ ಕರ್ತವ್ಯ ಕೂಡ ನಿಭಾಯಿಸಬೇಕು. ಬಾಲಕರು ಬೈಕ್ ಓಡಿಸುವುದು ಕಾನೂನು ರೀತ್ಯ ಅಪರಾಧವಾಗಿದೆ. ಪಾಲಕರಿಗೆ ದಂಡ ಹಾಗೂ ಶಿಕ್ಷೆ ವಿಧಿಸಲಾಗುತ್ತದೆ. ಹಾಗಾಗಿ ಚಾಲನಾ ಪರವಾನಗಿ ಪಡೆದುಕೊಂಡೇ ಬೈಕ್‌ಗಳನ್ನು ಓಡಿಸಬೇಕು. ಈ ನೆಲದ ಕಾನೂನುಗಳನ್ನು ಪರಿಪಾಲಿಸಬೇಕು ಎಂದರು.

ಜಿಲ್ಲಾಧಿಕಾರಿ ಎಂ.ಎಸ್. ದಿವಾಕರ್ ಮಾತನಾಡಿ, ಬಾಲ್ಯ ವಿವಾಹ ತಡೆಗೆ ಎಲ್ಲರೂ ಸಹಕರಿಸಬೇಕು. ತನ್ನ ಸಹಪಾಠಿ ಶಾಲೆಗೆ ಸತತ ನಾಲ್ಕು ದಿನಗಳಿಂದ ಗೈರಾಗಿದ್ದಾರೆ ಎಂದು ತಿಳಿದರೆ 1098ಗೆ ಕರೆ ಮಾಡಬೇಕು. ಬಾಲ್ಯ ವಿವಾಹ ನಡೆಯುತ್ತಿದೆ ಎಂದು ಕರೆಮಾಡಿ ತಿಳಿಸಬೇಕು. ಸಮಾಜದಲ್ಲಿ ಬೇರೂರಿರುವ ಅನಿಷ್ಟ ಪದ್ಧತಿ ಹೋಗಲಾಡಿಸಲು ನಾವೆಲ್ಲರೂ ಸನ್ನದ್ಧರಾಗಬೇಕು ಎಂದರು.

ಬಸ್ ಸಮಸ್ಯೆ, ಭ್ರೂಣಹತ್ಯೆ ಕುರಿತು ವಿದ್ಯಾರ್ಥಿಗಳು ಪ್ರಶ್ನೆ ಕೇಳಿದರು. ಶಾಲೆಗಳಲ್ಲಿ ಶೌಚಾಲಯ, ಗ್ರಂಥಾಲಯ, ಗಣಕಯಂತ್ರ, ಪ್ರಯೋಗಾಲಯ, ಆಟದ ಮೈದಾನದ ಬಗ್ಗೆಯೂ ಮಕ್ಕಳು ಜಿಲ್ಲಾಡಳಿತದ ಗಮನ ಸೆಳೆದರು. ಕೆಲ ಶಾಲಾ ಆವರಣಗಳಲ್ಲಿ ಮದ್ಯದ ಬಾಟಲಿ ಕೂಡ ದೊರೆಯುತ್ತಿವೆ ಎಂದು ಶಾಲಾ ಮಕ್ಕಳೇ ದೂರಿದರು.

ಮಕ್ಕಳ ಆಯೋಗದ ಮಾಜಿ ಸದಸ್ಯ ಹಾಗೂ ಸಂಪನ್ಮೂಲ ವ್ಯಕ್ತಿ ರಾಘವೇಂದ್ರ ಎಚ್.ಸಿ. ಮಕ್ಕಳೊಂದಿಗೆ ಸಂವಾದ ನಡೆಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಎಸ್. ಶ್ವೇತಾ, ಡಿಡಿಪಿಐ ವೆಂಕಟೇಶ್ ರಾಮಚಂದ್ರಪ್ಪ, ಡಿಸಿಪಿಒ ಸುದೀಪ್ ಕುಮಾರ ಉಂಕಿ ಇದ್ದರು. ಜಿಲ್ಲೆಯ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

ಮಕ್ಕಳ ಸಹಾಯವಾಣಿಗೆ ಕರೆಮಾಡಿ...

ದೌರ್ಜನ್ಯ ನಡೆದಾಗ ಮಕ್ಕಳು ಯಾರನ್ನೂ ಸಂಪರ್ಕಿಸಬೇಕು? ಎಂದು ವಿದ್ಯಾರ್ಥಿ ರಾಹುಲ್ ಪ್ರಶ್ನಿಸಿದಾಗ ಮಕ್ಕಳ ರಕ್ಷಣಾ ನಿರ್ದೇಶನಾಲಯದ ನಿರ್ದೇಶಕ ಡಾ. ಎಂ. ಆರ್. ರವಿ ಉತ್ತರಿಸಿ, ಮಕ್ಕಳ ಸಹಾಯವಾಣಿ 1098ಗೆ ಕರೆ ಮಾಡಿ ದೂರಬೇಕು. ಮಕ್ಕಳ ಕಾಯ್ದೆಗಳು ಪರಿಣಾಮಕಾರಿಯಾಗಿವೆ. ದೌರ್ಜನ್ಯಗಳು ನಡೆದಾಗ ಕರೆ ಮಾಡಿ ತಿಳಿಸಬೇಕು. ಸಮಾಜ ಸುಧಾರಣೆಗೆ ಮಕ್ಕಳು ಮುಂದಾಗಬೇಕು ಎಂದರು.

ಬಾಲ್ಯವಿವಾಹ ತಡೆ-ಕಾರ್ಯಾಗಾರ ಉದ್ಘಾಟಿಸಿದ ಡಾ. ರವಿ

ಬಾಲ್ಯ ವಿವಾಹ ನಿಯಂತ್ರಣ ಸಾಂಘಿಕ ಜವಾಬ್ದಾರಿ

KP

ಬಳ್ಳಾರಿಯಲ್ಲಿ ಜರುಗಿದ ಬಾಲ್ಯವಿವಾಹ ತಡೆಗಟ್ಟುವಲ್ಲಿ ಸವಾಲುಗಳು ಮತ್ತು ಪರಿಹಾರಗಳು' ಕುರಿತು ಒಂದು ದಿನದ ರಾಜ್ಯಮಟ್ಟದ ಕಾರ್ಯಾಗಾರಕ್ಕೆ ಚಾಲನೆ ನೀಡಲಾಯಿತು.

● **ಕನ್ನಡಪ್ರಭ ವಾರ್ತೆ** ಬಳ್ಳಾರಿ

ಸಮಾಜದಲ್ಲಿ ಪಿಡುಗಾಗಿ ಪರಿಗಣಿಸಿರುವ ಬಾಲ್ಯ ವಿವಾಹ ಪ್ರಕರಣಗಳ ನಿಯಂತ್ರಣವು ಸರ್ಕಾರ, ಸ್ಥಳೀಯ ಸಂಘ-ಸಂಸ್ಥೆಗಳ ಜತೆಗೆ ಪ್ರತಿಯೊಬ್ಬರ ಸಾಂಘಿಕ ಹಾಗೂ ಸಮುದಾಯದ ಜವಾಬ್ದಾರಿಯಾಗಿದೆ ಎಂದು ರಾಜ್ಯ ಮಕ್ಕಳ ನಿರ್ದೇಶನಾಲಯದ ನಿರ್ದೇಶಕ ಡಾ. ಎಂ.ಆರ್. ರವಿ ಹೇಳಿದರು.

ರೀಡ್ಸ್ ಸಂಸ್ಥೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಸಿಎಸಿಎಲ್-ಕೆ ಸಂಯುಕ್ತಾಶ್ರಯದಲ್ಲಿ ನಗರದ ಜಿಪಂ ಅಬ್ದುಲ್ ನಜೀರ್‌ಸಾಬ್ ಸಭಾಂಗಣದಲ್ಲಿ 'ಬಾಲ್ಯವಿವಾಹ ನಿಷೇಧ ಕಾಯ್ದೆ-2006 ಹಾಗೂ ಬಾಲ್ಯವಿವಾಹ ತಡೆಗಟ್ಟುವಲ್ಲಿ ಸವಾಲುಗಳು ಮತ್ತು ಪರಿಹಾರಗಳು' ಕುರಿತು ಏರ್ಪಡಿಸಿದ್ದ ಒಂದು ದಿನದ ರಾಜ್ಯಮಟ್ಟದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ಮಕ್ಕಳ ಹಿತಾಸಕ್ತಿಗೆ ಸಮಾಜದ ಎಲ್ಲ ಭಾಗಿದಾರರು ಒಟ್ಟಾಗಿ ಬೆರೆತು ಬಾಲ್ಯ ವಿವಾಹ ನಿಯಂತ್ರಣದ ದೃಢ ಸಂಕಲ್ಪ ಹೊಂದಬೇಕು. ಈ ನಿಟ್ಟಿನಲ್ಲಿ ಸರ್ಕಾರ ಹಾಗೂ ವಿವಿಧ ಇಲಾಖೆಗಳ ಸಹಭಾಗಿತ್ವದಲ್ಲಿ ಸಾರ್ವಜನಿಕರೂಕೈಜೋಡಿಸಿ ಕೆಲಸ ನಿರ್ವಹಿಸಿದಾಗ ಮಾತ್ರ ಬಾಲ್ಯ ವಿವಾಹ ಪ್ರಕರಣಗಳನ್ನು ತಡೆಗಟ್ಟಬಹುದು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಬಾಲ್ಯ ವಿವಾಹವು ಜ್ವಲಂತ ಸಮಸ್ಯೆಯಾಗಿ ಕಾಡುತ್ತಿದೆ. ಇದರಿಂದಾಗುವ ದುಷ್ಪರಿಣಾಮ ಹಾಗೂ ಕಾನೂನು ಕ್ರಮಗಳ ಕುರಿತು ಹಳ್ಳಿ-ಗ್ರಾಪಂ ಮಟ್ಟಗಳಲ್ಲಿ ವ್ಯಾಪಕ ಪ್ರಚಾರ ಕೈಗೊಳ್ಳುವ ಅವಶ್ಯಕತೆ ಇದ್ದು, ಬಾಲ್ಯವಿವಾಹ ಪ್ರಕರಣ ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ 1098ಗೆ ಸಂಪರ್ಕಿಸಿ ಮಾಹಿತಿ ನೀಡುವ ಕುರಿತು ಅರಿವು ಮೂಡಿಸಬೇಕು ಎಂದು ತಿಳಿಸಿದರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಮಾತನಾಡಿ, ಬಾಲ್ಯವಿವಾಹ ಪ್ರಕರಣಗಳು ಹೆಚ್ಚಾಗಿ ಕಂಡುಬರುವ ಸ್ಥಳಗಳನ್ನು ಗುರುತಿಸಿ ಅವಲೋಕನ ಮಾಡಿ, ಬಾಲ್ಯ ವಿವಾಹ ನಿಷೇಧಿಸಲು ಕೈಗೊಳ್ಳಬೇಕಾದ ಕಾರ್ಯಗಳನ್ನು ಕ್ರಮಬದ್ಧವಾಗಿ ಅನುಸರಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳನ್ನು ನಿಯಂತ್ರಿಸಲು ವಿವಿಧ ಇಲಾಖೆಗಳ ಹಾಗೂ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ಆಯೋಜಿಸಬೇಕು. ಸಾರ್ವಜನಿಕರಲ್ಲಿ ಹೆಚ್ಚಾಗಿ ಜಾಗೃತಿ ಮೂಡಿಸಬೇಕು ಎಂದರು.

ಬಳ್ಳಾರಿ ವಲಯ ಪೊಲೀಸ್ ಮಹಾನಿರೀಕ್ಷಕ ಬಿ.ಎಸ್. ಲೋಕೇಶ್ ಕುಮಾರ್‌ಮಾತನಾಡಿ, ಬಾಲ್ಯವಿವಾಹವು ಕಾನೂನು ವಿರುದ್ಧವಾಗಿದೆ. ಅಂತಹ ಪ್ರಕರಣಗಳಿಗೆ ಶಿಕ್ಷೆ ಇದ್ದು, ಜನ ಸಾಮಾನ್ಯರು ಎಚ್ಚೆತ್ತುಕೊಳ್ಳಬೇಕಿದೆ ಎಂದರು. ಶಿಕ್ಷಣದಿಂದ ಮಾತ್ರ ಬಾಲ್ಯ ವಿವಾಹ ಪ್ರಕರಣ ನಿಯಂತ್ರಿಸಲು ಸಾಧ್ಯವಾಗಲಿದ್ದು, ಈ ನಿಟ್ಟಿನಲ್ಲಿ ಮಕ್ಕಳಿಗೆ ಶಿಕ್ಷಣ ಒದಗಿಸಿ ಸಾಮಾಜಿಕ ಪಿಡುಗುಗಳ ಬಗ್ಗೆ ಅರಿವು ಮೂಡಿಸೋಣ ಎಂದು ಕರೆ ನೀಡಿದರು.

ಇದೇ ವೇಳೆ ಗಣ್ಯರು ''ನಿಲ್ಲಿಸಿ ಬಾಲ್ಯ ವಿವಾಹ'' ಎನ್ನುವ ಫಲಕ ಬಿಡುಗಡೆಗೊಳಿಸಿದರು. ಪೊಲೀಸ್ ಇಲಾಖೆ ವತಿಯಿಂದ ಬಾಲ್ಯ ವಿವಾಹ ತಡೆ ವಿಡಿಯೋ ತುಣುಕುಗಳ ಪ್ರದರ್ಶಿಸಲಾಯಿತು. ಬಳಿಕ 2025ರ ಮಕ್ಕಳ ಸ್ನೇಹ ಹಾಗೂ ವಾಲ್ ಕ್ಯಾಲೆಂಡರ್‌ಬಿಡುಗಡೆಗೊಳಿಸಲಾಯಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಶೋಭಾರಾಣಿ ವಿ.ಜೆ., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್‌ಕುಮಾರ್.ಕೆ.ಎಚ್., ರೀಡ್ಸ್ ಸಂಸ್ಥೆಯ ಅಧ್ಯಕ್ಷ ಬಿ. ಸಿದ್ದರಾಮಯ್ಯ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ವಿಜಯಲಕ್ಷ್ಮಿ ಮೈದೂರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆ ನಾಗಪ್ಪ, ಮೈಸೂರಿನ ಆರ್‌ಎಲ್‌ಎಚ್‌ಪಿಯ ಕಾರ್ಯನಿರ್ವಾಹಕ ನಿರ್ದೇಶಕರು ಹಾಗೂ ಸಿಎಸಿಎಲ್‌ಕೆ ಸಂಚಾಲಕಿ ಸರಸ್ವತಿ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯ ಎಚ್.ಸಿ. ರಾಘವೇಂದ್ರ, ರೀಡ